[redacted]



# ಕನಿಷ್ಠ ಬೆಂಬಲ ಯೋಜನೆಯಡಿ ಬಿಳಿ ಜೋಳ ನೋಂದಣಿ ಮತ್ತು ಖರೀದಿ– ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ



ಬಳ್ಳಾರಿ,ಮಾ–: 2023–24ನೇ ಸಾಲಿನ ಮುಂಗಾರು ಋತುವಿನಲ್ಲಿ ಬೆಳೆದ ಬಿಳಿ ಜೋಳವನ್ನು ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ನೇರವಾಗಿ ಖರೀದಿಸಲು ಬಳ್ಳಾರಿ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ತೀರ್ಮಾನಿಸಿದ್ದು, ಎಫ್.ಎ.ಕ್ಯೂ. ಗುಣಮಟ್ಟದ ಜೋಳವನ್ನು ರೈತರಿಂದ ಖರೀದಿಸಲಾಗುವುದು. ಜಿಲ್ಲೆಯಲ್ಲಿ 05 ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ ಎಂದು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.ಸರ್ಕಾರವು ರಾಜ್ಯದಲ್ಲಿ 1 ಲಕ್ಷ ಮೆ.ಟನ್ ಗುರಿಯನ್ನು ತಲುಪುವ ವರೆಗೆ ಖರೀದಿಸಲು ಸೂಚಿಸಿದ್ದರಿಂದ ರೈತರು ತಕ್ಷಣವೇ ನೋಂದಣಿ ಮತ್ತು ಖರೀದಿಯ ಉಪಯೋಗವನ್ನು ಸದುಪಯೋಗಪಡೆದುಕೊಳ್ಳಬೇಕು ಎಂದಿದ್ದಾರೆ.

*ಖರೀದಿಸುವ ಉತ್ಪನ್ನ ಮತ್ತು ನಗದಿಯಾದ ಬೆಂಬಲ ಬೆಲೆ:*ಬಿಳಿ ಜೋಳ. ಮಾಲ್ದಂಡಿ ಬಿಳಿ ಜೋಳಕ್ಕೆ ರೂ.3,225 (ಪ್ರತಿ ಕ್ವಿಂಟಾಲ್ಗೆ) ಮತ್ತು ಹೈಬ್ರಿಡ್ ಬಿಳಿ ಜೋಳಕ್ಕೆ ರೂ.3,180 (ಪ್ರತಿ ಕ್ವಿಂಟಾಲ್ಗೆ) ಇರುತ್ತದೆ.ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ, ಬೆಂಗಳೂರು. ಇವರು ಖರೀದಿಸುವ ಏಜೆನ್ಸಿಯಾಗಿರುತ್ತಾರೆ. ಹಿಂಗಾರು ಋತುವಿನ ರೈತರ ನೊಂದಣಿ ಪ್ರಾರಂಭವು ಮಾ.11 ರಿಂದ ಮೇ.31 ವರೆಗೆ ಮತ್ತು ಹಿಂಗಾರು ಋತುವಿನ ಖರೀದಿ ಪ್ರಾರಂಭ ಮತ್ತು ಮುಕ್ತಾಯದ ದಿನವು ಏ.01 ರಿಂದ ಮೇ.31 ರ ವರೆಗೆ ಇರುತ್ತದೆ.

*ಜಿಲ್ಲೆಯಲ್ಲಿ ತೆರೆದಿರುವ ಖರೀದಿ ಕೇಂದ್ರ ಮತ್ತು ಅಧಿಕಾರಿ ಸಂಪರ್ಕ ವಿವರ:*ಬಳ್ಳಾರಿ ತಾಲ್ಲೂಕಿನ ಕರ್ನಾಟಕ ರಾಜ್ಯ ಉಗ್ರಾಣ ನಿಗಮ ಬಳ್ಳಾರಿ ಘಟಕ–1&2 ರ ನರಸಿಂಹ ಅವರ ಮೊ.9900677875, ಕಂಪ್ಲಿಯ ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ರಂಗಪ್ಪ ಅವರ ಮೊ.9740838910, ಸಿರುಗುಪ್ಪದ ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ಮೋಹನ ಕುಮಾರ ಅವರ ಮೊ.9731421918, ಕುರುಗೋಡಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನ, ಎ.ಪಿ.ಎಮ್.ಸಿಯ ಹುಸೇನ್ ಸಾಹೆಬ್ ಅವರ ಮೊ.8951307333, ಸಂಡೂರಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನ, ಎ.ಪಿ.ಎಮ್.ಸಿಯ ಶಿವಲಿಂಗಪ್ಪ ಅವರ ಮೊ.9945940350.

*ಷರತ್ತುಗಳು:*ನೋಂದಣಿ ಮಾಡುವ ರೈತರು ಸ್ವತಃ ಖರೀದಿ ಕೇಂದ್ರಗಳಿಗೆ ಬಂದು ಬಯೋಮೆಟ್ರಿಕ್ ಮುಖಾಂತರ ಕಡ್ಡಾಯವಾಗಿ ನೋಂದಣಿ ಮಾಡಿಸಬೇಕು. ಬಿಳಿ ಜೋಳ ನೋಂದಾಯಿಸಿಕೊಂಡ ಪ್ರತಿ ರೈತರಿಂದ ಪ್ರತಿ ಎಕರೆಗೆ 20 ಕ್ವಿಂಟಾಲ್ನಂತೆ ರೈತನ ಜಮೀನಗನುಗುಣವಾಗಿ ಬಿಳಿ ಜೋಳವನ್ನು ಖರೀದಿಸಲಾಗುವುದು. ರೈತರಿಗೆ ಕೃಷಿ ಇಲಾಖೆಯಿಂದ ನೀಡಿರುವ ಫ್ರೂಟ್ಸ್ ಐ.ಡಿ. ಯನ್ನು (ರೈತರ ನೋಂದಣಿ ಮತ್ತು ಏಕೀಕೃತ ಫಲಾನುಭವಿ ಮಾಹಿತಿ ವ್ಯವಸ್ಥೆ) ನೋಂದಣಿ ಅಥವಾ ಖರೀದಿ ಕೇಂದ್ರಕ್ಕೆ ತಂದು ಬೆಂಬಲ ಬೆಲೆ ಯೋಜನೆಯಡಿ ಜೋಳ ಮಾರಾಟ ಮಾಡಲು ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬೇಕು. ರೈತರು ಸರಬರಾಜು ಮಾಡುವ ಜೋಳ ಗುಣಮಟ್ಟವನ್ನು ಕೃಷಿ ಇಲಾಖೆಯು ನಿಯೋಜಿಸಿದ ಗುಣಮಟ್ಟ ಪರಿವೀಕ್ಷಕರು ಪರಿಶೀಲಿಸಿ ದೃಢೀಕರಿಸಿದ ನಂತರವೇ ಜೋಳ ಖರೀದಿಸಲಾಗುವುದು. ರೈತರು ತಮ್ಮ ಸ್ವಂತ ಖರ್ಚಿನಲ್ಲಿ ನಗದಿಪಡಿಸಿದ ಖರೀದಿ ಕೇಂದ್ರಕ್ಕೆ ಬಿಳಿ ಜೋಳ ಉತ್ಪನ್ನಗಳನ್ನು ಸರಬರಾಜು ಮಾಡಬೇಕು. ರೈತರಿಂದ ಖರೀದಿಸುವ ಜೋಳ ಸರಕಿನ ಮೌಲ್ಯವನ್ನು ನೇರವಾಗಿ ರೈತರ ಬ್ಯಾಂಕ್ ಖಾತೆಗಳಿಗೆ ಹಣವನ್ನು ಪಾವತಿಸಲಾಗುವುದು. ಮಧ್ಯವರ್ತಿಗಳು ಹಾಗೂ ದಲ್ಲಾಳಿಗಳು ಖರೀದಿ ಕೇಂದ್ರಗಳಿಗೆ ಜೋಳ ತಂದಲ್ಲಿ ಅಂತವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.ಹೆಚ್ಚಿನ ಮಾಹಿತಿಗಾಗಿ ಖರೀದಿ ಏಜೆನ್ಸಿಯಾದ ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯ ಜಿಲ್ಲಾ ಕಚೇರಿಯ ಜಿಲ್ಲಾ ವ್ಯವಸ್ಥಾಪಕ ಆಶಿಕ್ ಅಲಿ ಅವರ ಮೊ.9686935278 ಅಥವಾ ಆಯಾ ತಾಲ್ಲೂಕಿನ ಖರೀದಿ ಕೇಂದ್ರಗಳ ಖರೀದಿ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಮಿಶ್ರಾ ಅವರು ತಿಳಿಸಿದ್ದಾರೆ.

# ತಾರತಮ್ಯದಿಂದ ಕೂಡಿರುವ ಪೌರತ್ವ ತಿದ್ದುಪಡಿ ಕಾಯಿದೆ (ಸಿಎಎ)ರದ್ದತಿ. ಸಂವಿಧಾನ ವಿರೋಧಿ ಹೇಳಿಕೆ ನೀಡುತ್ತಿರುವ ಅನಂತ್ ಕುಮಾರ್ ವಿರುದ್ಧ ಪ್ರಕರಣ ದಾಖಲಿಸಲು ಆಗ್ರಹ



ಕೊಪ್ಪಳ: ತಾರತಮ್ಯದಿಂದ ಕೂಡಿರುವ ಪೌರತ್ವ ತಿದ್ದುಪಡಿ ಕಾಯಿದೆ (ಸಿಎಎ)ರದ್ದತಿ. ಸಂವಿಧಾನ ವಿರೋಧಿ ಹೇಳಿಕೆ ನೀಡುತ್ತಿರುವ ಅನಂತ್ ಕುಮಾರ್ ವಿರುದ್ಧ ಪ್ರಕರಣ ದಾಖಲಿಸಲು ಆಗ್ರಹಿಸಿ ಪ್ರಗತಿ ಪರ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ವಿವಿಧ ಸಂಘಟನೆಗಳಿಂದ ಕೊಪ್ಪಳ ಜಿಲ್ಲಾಧಿಕಾರಿಗಳ ಅನುಪಸ್ಥಿತಿಯಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಶ್ರೀಮತಿ ಸಾವಿತ್ರಿ ಡಿ. ಕಡಿ ಅವರ ಮುಖಾಂತರರಾಷ್ಟ್ರಪತಿಗಳಿಗೆ ಗುರುವಾರ ಮನವಿ ಪತ್ರ ಸಲ್ಲಿಸಲಾಯಿತು.

ಮನವಿಯಲ್ಲಿ ಭಾರತ ದೇಶದಲ್ಲಿ ಜಾರಿ ಮಾಡಿರುವ ಪೌರತ್ವ ತಿದ್ದುಪಡಿ ಕಾಯಿದೆ (ಸಿಎಎ) ಯಿಂದ ಕಾನೂನು ಎದುರು ಎಲ್ಲರೂ ಸಮಾನರು ಎಂಬ ಕಲಂ 14ರ ಉಲ್ಲಂಘನೆಯಾಗಿದೆ. ಭಾರತೀಯ ಅಂತರಾಷ್ಟ್ರೀಯ ಮಾನವ ಹಕ್ಕುಗಳ ಉಲ್ಲಂಘನೆಯಾಗಿದೆ ಎಂದು ವಿಶ್ವ ಸಂಸ್ಥೆಯ ಪ್ರಧಾನ ಆಯುಕ್ತರ ಕಚೇರಿಯ ವಕ್ತಾರರು ತಿಳಿಸಿದ್ದಾರೆ. ಧಾರ್ಮಿಕ ಸ್ವಾತಂತ್ರಕ್ಕೆ ಗೌರವ ನೀಡಿ ಹಾಗೂ ಎಲ್ಲಾ ಸಮುದಾಯಗಳಿಗೆ ಸಮಾನ ಹಕ್ಕುಗಳ ನೆಲದ ಕಾನೂನು ಅಡಿಯಲ್ಲಿ ದೊರಕಬೇಕು. ಇದನ್ನು ಪ್ರಜಾಪ್ರಭುತ್ವದ ಭೌಗೋಳಿಕವಾದ ಮೂಲಭೂತ ಸಿದ್ಧಾಂತಗಳಲ್ಲಿ ಪ್ರತಿಪಾದನೆಯಾಗಿದೆ. ಪೌರತ್ವ ತಿದ್ದುಪಡಿ ಕಾಯಿದೆ ಜಾರಿಗೆ ಮುಂಚೆ ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು. ಎಲ್ಲರೂ ಒಳಗೊಂಡಂತೆ ಪೌರತ್ವ ಜಾರಿಗೆ ತರಲು ಒತ್ತಾಯಿಸುತ್ತೇವೆ.ಬಿಜೆಪಿಯ ಸಂಸದ ಅನಂತ್ ಕುಮಾರ್ ಹೆಗಡೆ ಅವರು ಈ ಹಿಂದೆ ಕೊಪ್ಪಳ ಜಿಲ್ಲೆಯ ಕುಕನೂರ ನಗರದಲ್ಲಿ ನಾವು ಬಂದಿದ್ದೇ ಸಂವಿಧಾನ ಬದಲಾಯಿಸಲು. ಯಾರೂ ತಡೆಯಲು ಸಾಧ್ಯವಿಲ್ಲ ಎಂದು ಅಹಂಕಾರದಿಂದ ಹೇಳಿದ್ದರು. ಆಗ ಲೋಕಸಭೆಯಲ್ಲಿ ಸಾಕಷ್ಟು ಚರ್ಚೆಗಳಾಗಿತ್ತು. ಅದೇ ರೀತಿ ಮೊನ್ನೆ ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಾಲೂಕಿನ ಹಿಲ್ಲೂರು ಗ್ರಾಮದಲ್ಲಿ ನಡೆದ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿ ಸಂವಿಧಾನ ಬದಲಾಯಿಸಲು ಈ ಬಾರಿ 400 ಸಂಸದರು ಆಯ್ಕೆ ಮಾಡಿ ಎಂದು ಕರೆ ನೀಡಿರುವುದು ಸಂವಿಧಾನ ಮತ್ತು ದೇಶ ವಿರೋಧಿಯಾಗಿದೆ ಅಲ್ಲದೆ ಮಾಧ್ಯಮದವರನ್ನು ಅವಹೇಳನಕಾರಿಯಾಗಿ ಮಾತನಾಡಿದ್ದು.

ಇವರ ಹೇಳಿಕೆಗಳಿಂದ ಸಮಾಜದಲ್ಲಿ ಸಾಮರಸ್ಯ ಕದಡಿ ಕೋಮುಗಲಭೆಗೆ ಕಾರಣವಾಗುತ್ತದೆ. ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ತಕ್ಷಣ ಸಂಸದ ಅನಂತ್ ಕುಮಾರ್ ಹೆಗಡೆ ವಿರುದ್ಧ ಪ್ರಕರಣ ದಾಖಲಿಸಬೇಕು ಎಂದು ಪ್ರಗತಿಪರ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ಅಖಿಲ ಭಾರತ ಕಾರ್ಮಿಕ ಸಂಘಟನೆಗಳ ಒಕ್ಕೂಟದ ಜಿಲ್ಲಾ ಅಧ್ಯಕ್ಷ ಬಸವರಾಜ್ ಶೀಲವಂತರ್. ಜನಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಎಸ್.ಎ.ಗಫಾರ್. ಬೀದಿ ಬದಿ ವ್ಯಾಪಾರಸ್ಥರ ಸಂಘದ ತಾಲೂಕಾ ಅಧ್ಯಕ್ಷ ಆನಂದ ಅರಕೇರಿ. ಕರ್ನಾಟಕ ರೈತ ಸಂಘ (ಎ.ಐ.ಕೆ.ಕೆ.ಎಸ್.) ರಾಜ್ಯ ಅಧ್ಯಕ್ಷ ಡಿ.ಹೆಚ್. ಪೂಜಾರ್. ಜಿಲ್ಲಾ ಕಾರ್ಯದರ್ಶಿ ಬಸವರಾಜ್ ನರೇಗಲ್. ಕರ್ನಾಟಕ ರಾಜ್ಯ ಕಟ್ಟಡ ಕಟ್ಟುವ ಮತ್ತು ಕಲ್ಲು ಒಡೆಯುವ ಕ್ವಾರಿ ಕಾರ್ಮಿಕರ ಸಂಘದ ಜಿಲ್ಲಾ ಸಂಘಟನಾ ಸಂಚಾಲಕ ತುಕಾರಾಮ್ ಬಿ. ಪಾತ್ರೋಟಿ. ಪ್ರಸಾದ್ ಕಾಳೆ. ಕರ್ನಾಟಕ ದಲಿತ ಸಂಘರ್ಷ ಸಮಿತಿ (ಸಂಯೋಜಕ) ಜಿಲ್ಲಾ ಸಂಯೋಜಕ ಮುದಿಯಪ್ಪ ಹೊಸಮನಿ. ಭೀಮ್ ಆರ್ಮಿ ಜಿಲ್ಲಾ ಅಧ್ಯಕ್ಷ ನಿಂಗು ಜಿ.ಎಸ್. ಬೆಣಕಲ್ ಮುಂತಾದವರು ಆಗ್ರಹಿಸಿದ್ದಾರೆ.

# ವಿಶ್ವ ಮಹಿಳಾ ದಿನಾಚರಣೆಯ ಪ್ರಯುಕ್ತ ಡಾ.ಕಾಮಿನೇನಿ ಅರುಣ ಅವರಿಗೆ ಸನ್ಮಾನ ಪುರುಷರಿಗಿಂತ ಮಹಿಳೆಯರು ಎಲ್ಲಾ ರಂಗದಲ್ಲಿಯೂ ಒಂದು ಹೆಜ್ಜೆ ಮುಂದೆ ಇದ್ದಾರೆ–ವಿಮ್ಸ್ ಡೈರೆಕ್ಟರ್ ಡಾ.ಗಂಗಾಧರಗೌಡ



ಬಳ್ಳಾರಿ ಮಾ –: ಪ್ರಪಂಚದಲ್ಲಿ ಮಹಿಳೆಯರನ್ನು ಎಲ್ಲಿ ಗೌರವಿಸಲಾಗುತ್ತದೆಯೋ ಅಲ್ಲಿ ಸಂಪೂರ್ಣ ಅಭಿವೃದ್ಧಿ ಇರುತ್ತದೆ ಎಂದು ವಿಮ್ಸ್ ನಿರ್ದೇಶಕರಾದ ಡಾ.ಗಂಗಾಧರಗೌಡ ತಿಳಿಸಿದರು.

ವಿಮ್ಸ್ ನೇತೃತ್ವದಲ್ಲಿ ಶಿಕ್ಷಕರ ಭವನದಲ್ಲಿ ಏರ್ಪಡಿಸಿದ ವಿಶ್ವ ಮಹಿಳಾ ದಿನಾಚರಣೆಯ ಕಾರ್ಯಕ್ರಮದಲ್ಲಿ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದರು. ಮಹಿಳೆಯರು ಪುರುಳರೊಂದಿಗೆ ಸಮಾನವಾಗಿ, ಒಂದು ಹೆಜ್ಜೆ ಎಲ್ಲಾ ರಂಗಗಳಲ್ಲಿಯೂ ಮುಂಚುಣಿಯಲ್ಲಿದ್ದಾರೆ ಎಂದು, ಮಹಿಳೆ ಅಬಲೆ ಅಲ್ಲ ಸಬಲೆ ಎಂದರು. ನಾವು ಮಹಿಳೆಯರನ್ನು ಕೀಳು ಮಟ್ಟವಾಗಿ ನೋಡಬಾರದೆಂದು, ಮಹಿಳೆ ಇಲ್ಲ ಎಂದರೇ ಪ್ರಕೃತಿನೆ ಇಲ್ಲ ಎಂದು ಸವಿಸ್ತಾರವಾಗಿ ತಿಳಿಸಿದರು.

ವಿಮ್ಸ್ ಪ್ರಿನ್ಸ್‌ಪಾಲ್ ಡಾಕ್ಟರ್ ಕೃಷ್ಣಸ್ವಾಮಿ ಮಾತಾನಾಡುತ್ತಾ ಮಹಿಳೆಯರು ಸರ್ವತ್ರಾ ಪೂಜಿಸತಕ್ಕಂತವರೆಂದು ಎಲ್ಲರೂ ತಿಳಿದುಕೊಳ್ಳಬೇಕು ಎಂದರು.

ಇದೇ ಸಂಧರ್ಬದಲ್ಲಿ ವಿಶ್ವ ಮಹಿಳಾ ದಿನಾಚರಣೆಯ ನಿಮಿತ್ತ ಪ್ರಖ್ಯಾತ ವೈದ್ಯರಾದ ಕಾಮಿನೇನಿ ಅರುಣಾ ರಾವು ಅವರನ್ನು ಅಭಿನಂದಿಸಿ ಗೌರವಿಸಿ ಸನ್ಮಾನಿಸಿದರು. ಈ ವೇಳೆ ದಂತ ವೈದ್ಯಕೀಯ ಕಾಲೇಜು ಪ್ರಿನ್ಸ್‌ಪಾಲ್ ಡಾಕ್ಟರ್ ಭಾರತಿ, ವೈದ್ಯಕೀಯ ವಿದ್ಯಾರ್ಥಿಗಳು ಮತ್ತಿತರರು ಉಪಸ್ಥಿತರಿದ್ದರು.

# 7ನೇ ವೇತನ ಆಯೋಗ ವರದಿ ಸ್ವೀಕಾರಕ್ಕೆ ಸರ್ಕಾರ ಹಿಂದೇಟು.!

ಬೆಂಗಳೂರು,ಮಾ.– ರಾಜ್ಯ ಸರ್ಕಾರಿ ನೌಕರರ ವೇತನ ಪರಿಷ್ಕರಣೆಗೆ ಸಂಬಂಧಿಸಿದಂತೆ ರಚಿಸಲಾಗಿದ್ದ 7ನೇ ರಾಜ್ಯ ವೇತನ ಆಯೋಗದ ವರದಿ ಸಿದ್ಧಗೊಂಡಿದ್ದು, ಅದನ್ನು ಸ್ವೀಕರಿಸಲು ರಾಜ್ಯಸರ್ಕಾರ ಹಿಂದೇಟು ಹಾಕುತ್ತಿದೆ. ರಾಜ್ಯ ಸರ್ಕಾರದ ನಿವೃತ್ತ ಮುಖ್ಯ ಕಾರ್ಯದರ್ಶಿ ಸುಧಾಕರ್ ರಾವ್ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ 7ನೇ ರಾಜ್ಯ ವೇತನ ಆಯೋಗದ ಅವ ಇಂದಿಗೆ ಮುಕ್ತಾಯಗೊಳ್ಳುತ್ತಿದೆ. ಉನ್ನತ ಮೂಲಗಳ ಪ್ರಕಾರ, ಸಿದ್ಧವಾಗಿರುವ ವರದಿ ಸಲ್ಲಿಸಲು ಆಯೋಗ ತಯಾರಿದೆ. ಆದರೆ ಸರ್ಕಾರವೇ ಹಿಂದೇಟು ಹಾಕುತ್ತಿದೆ ಎಂದು ತಿಳಿದುಬಂದಿದೆ.ಈಗಾಗಲೇ ಪಂಚಖಾತ್ರಿ ಯೋಜನೆಗಳಿಗೆ 52 ಸಾವಿರ ಕೋಟಿ ರೂ. ಬಳಿಕೆ ಸೇರಿದಂತೆ ಒಟ್ಟು ಯೋಜನಾ ವೆಚ್ಚಕ್ಕೆ 1.20 ಲಕ್ಷ ಕೋಟಿ ರೂ.ಗಳನ್ನು ನಗದಿ ಮಾಡಿರುವ ಸರ್ಕಾರಕ್ಕೆ ರಾಜ್ಯಸರ್ಕಾರಿ ನೌಕರರ ವೇತನ ಪರಿಷ್ಕರಣೆಗೆ ಹಣಕಾಸಿನ ಕೊರತೆ ಎದುರಾಗಿದೆ ಎಂದು ಹೇಳಲಾಗುತ್ತಿದೆ.ಈ ಹಿನ್ನೆಲೆಯಲ್ಲಿ ವರದಿಯನ್ನು ಸ್ವೀಕರಿಸುವ ಬದಲು ಮತ್ತಷ್ಟು ಕಾಲ ಆಯೋಗದ ಅವಧಿ ವಿಸ್ತರಣೆ ಮಾಡಲು ಉದ್ದೇಶಿಸಲಾಗಿದೆ ಎನ್ನಲಾಗಿದೆ. ಈ ಹಿನ್ನೆಲೆಯಲ್ಲೇ ಈಗಾಗಲೇ 2 ಬಾರಿ ಮುಖ್ಯಮಂತ್ರಿ ಸಭೆ ನಡೆಸಿದ್ದಾರೆ ಎಂದು ಮೂಲಗಳು ತಿಳಿಸಿವೆ.ಸಿದ್ಧಪಡಿಸಲಾಗಿರುವ ಆಯೋಗದ ವರದಿಯಲ್ಲಿ ಸರ್ಕಾರಿ ನೌಕರರಿಗೆ ಶೇ.30 ರಷ್ಟು ವೇತನ ಹೆಚ್ಚು ಮಾಡಬೇಕು ಎಂಬ ಶಿಫಾರಸ್ಸುಗಳಿವೆ ಎನ್ನಲಾಗಿದೆ. ಈಗಾಗಲೇ ಮಧ್ಯಂತರ ಪರಿಹಾರವಾಗಿ ಶೇ.17ರಷ್ಟು ವೇತನ ಹೆಚ್ಚಳವನ್ನು ಹಿಂದಿನ ಸರ್ಕಾರವೇ ಜಾರಿ ಮಾಡಿತ್ತು.ಚುನಾವಣಾ ಪ್ರಣಾಳಿಕೆಯಲ್ಲಿಯೇ 7ನೇ ವೇತನ ಆಯೋಗದ ವರದಿ ಜಾರಿಯ ಭರವಸೆ ಕಾಂಗ್ರೆಸ್ ನೀಡಿತ್ತು.ಸಿದ್ದರಾಮಯ್ಯನವರ ಸರ್ಕಾರ ಅಧಿಕಾರ ಕ್ಕೆ ಬಂದ ಬಳಿಕ ಪಂಚಖಾತ್ರಿ ಯೋಜನೆಗಳಿಗೆ ಆದ್ಯತೆ ನೀಡುತ್ತಿದ್ದು, ಸರ್ಕಾರಿ ನೌಕರರ ವೇತನ ಪರಿಷ್ಕರಣೆಗೆ ಗಮನ ಹರಿಸುತ್ತಿಲ್ಲ ಎಂಬ ಆರೋಪ ಕೇಳಿಬಂದಿವೆ.

# ಶ್ರೀರಾಮುಲು ಸಾಮರ್ಥ್ಯ ಏನೆಂದು ಪ್ರಧಾನಿ ಮೋದಿಯವರಿಗೆ ಚನ್ನಾಗಿ ಗೊತ್ತಿದೆ–ಡಾ.ಅರುಣ ಕಾಮಿನೇನಿ



ಬಳ್ಳಾರಿ ಮಾ –: ಮಾಜಿ ಸಚಿವ ಶ್ರೀರಾಮುಲು ಅವರನ್ನು ಆರಿಸಿ ತರುವಲ್ಲಿ ನಾವು ಯಶಸ್ವಿಯಾಗಬೇಕು ಎಂದು ಬಳ್ಳಾರಿಯ ಪ್ರಖ್ಯಾತ ವೈದ್ಯರು ಮತ್ತು ಬಳ್ಳಾರಿ ಜಿಲ್ಲಾ ಬಿಜೆಪಿ ಉಪಾಧ್ಯಕ್ಷರಾದ ಡಾ.ಅರುಣ ಕಾಮಿನೇನಿ ಅವರು ಹೇಳಿದರು. ಮಾಜಿ ಸಚಿವ ಶ್ರೀರಾಮುಲು ಮನೆಯಲ್ಲಿ ಆಯೋಜಿಸಿದ್ದ ಕಾರ್ಯಕರ್ತರ ಸಭೆಯನ್ನುದ್ದೇಶಿಸಿ ಮಾತನಾಡುತ್ತಾ

ಶ್ರೀರಾಮುಲು ಅವರ ಸಾಮರ್ಥ್ಯ ಏನೆಂದು ಪ್ರಧಾನಮಂತ್ರಿ ಮೋದಿಯವರಿಗೆ ಚನ್ನಾಗಿ ಗೊತ್ತಿದೆ, ಆದಕಾರಣ ಬಳ್ಳಾರಿಯ ಲೋಕಸಭೆ ಟಿಕೆಟನ್ನು ಶ್ರೀರಾಮುಲು ಅವರಿಗೆ ನೀಡಿದ್ದಾರೆ. ಆದಕಾರಣ ಏನೆ ಕಷ್ಟ ಇರಲಿ ಈ ಎರೆಡು ತಿಂಗಳು ನಮ್ಮ ಶಕ್ತಿಯನ್ನು ಮೀರಿ ಶ್ರಮಿಸಿ ಮೋದಿಯವರ ಮತ್ತು ಶ್ರೀರಾಮುಲು ಅವರ ಕೈಯನ್ನು ಬಲಪಡಿಸಿಬೇಕೆಂದು ತಿಳಿಸಿದರು. ಮೋದಿಯವರು ಶ್ರೀರಾಮುಲು ಅವರ ಮೇಲೆ ಇಟ್ಟಿರುವ ನಂಬಿಕೆಯನ್ನು ನಾವು ಉಳಿಸಿಕೊಳ್ಳಬೇಕೆಂದು, ಮೋದಿಯವರು ಪ್ರಧಾನಿಯಾದರೇ ಮಾತ್ರ ನಮ್ಮ ದೇಶಕ್ಕೆ ಉಳಿವು,ಇಲ್ಲವಾದಲ್ಲಿ ಕಷ್ಟವಾಗುತ್ತದೆ, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಈಗಾಗಲೇ ಕರ್ನಾಟಕ ರಾಜ್ಯವನ್ನು ಪಾಕಿಸ್ತಾನ ಮಾಡಲು ಹೊರಟಿದ್ದಾರೆ, ಹಿಂದು ರಾಜ್ಯವಾಗಲು ಬಿಡಲ್ಲ ಎಂದು ಬಹಿರಂಗವಾಗಿ ನುಡಿದಿದ್ದಾರೆ ಎಂದರು. ಆದಕಾರಣ ಮೋದಿಯವರ ಯೋಜನೆಗಳನ್ನು ಜನರಿಗೆ ಅರ್ಥೈಸಿ ಮೋದಿಯವರನ್ನು ಶ್ರೀರಾಮುಲು ಅವರನ್ನು ಆರಿಸಿ ತರುವಲ್ಲಿ ಯಶಸ್ವಿಯಾಗಬೇಕೆಂದು.

ಈ ಸಂಧರ್ಬದಲ್ಲಿ ಶ್ರೀರಾಮುಲು, ಸುರೇಶ್‌ಬಾಬು, ಮಹಿಪಾಲ್, ಡಾ.ಬಿ.ಕೆ.ಸುಂದರ್, ಐನಾಥರೆಡ್ಡಿ,ಸಿದ್ದಪ್ಪ,ಮಾರುತಿ ಪ್ರಸಾದ್, ಸುರೇಖ ಮತ್ತಿತರರು ಉಪಸ್ಥಿತರಿದ್ದರು.

# ಐಸಿಎಆರ್–ಮೂರು ದಿನಗಳ "ಪ್ರಸರಣ ಮತ್ತು ನರ್ಸರಿ ನಿರ್ವಹಣೆ" ಕುರಿತು ಕೌಶಲ್ಯಾಭಿವೃದ್ಧಿ



ಬಳ್ಳಾರಿ,ಮಾ–: ಇಲ್ಲಿಯ ಐಸಿಎಆರ್–ಭಾರತೀಯ ಮಣ್ಣು ಮತ್ತು ನೀರು ಸಂರಕ್ಷಣೆ ಸಂಸ್ಥೆಯ ಸಂಶೋಧನಾ ಕೇಂದ್ರ ವತಿಯಿಂದ ಬೆಳಗಲ್ ತಾಂಡಾದ ಎಸ್ಸಿಎಸ್ಪಿ ರೈತರಿಗೆ ಪರಿಶಿಷ್ಟ ಜಾತಿ ಉಪ ಯೋಜನೆ (ಎಸ್ಸಿಎಸ್ಪಿ) ಅಡಿಯಲ್ಲಿ ಪ್ರಸರಣ ಮತ್ತು ನರ್ಸರಿ ನಿರ್ವಹಣೆ ಕುರಿತು ಮೂರು ದಿನಗಳ ಕೌಶಲ್ಯ ಅಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.ಕಾರ್ಯಕ್ರಮದಲ್ಲಿ ಐಸಿಎಆರ್–ಭಾರತೀಯ ಮಣ್ಣು ಮತ್ತು ನೀರು ಸಂರಕ್ಷಣೆ ಸಂಸ್ಥೆಯ ಸಂಶೋಧನಾ ಕೇಂದ್ರದ ಮುಖ್ಯಸ್ಥರಾದ ಡಾ.ಬಿ.ಕೃಷ್ಣ ರಾವ್ ಅವರು ನರ್ಸರಿ ಮತ್ತು ನರ್ಸರಿಯ ಉದ್ಯಮಗಳ ಪ್ರಾಮುಖ್ಯತೆಯನ್ನು ರೈತರಿಗೆ ತಿಳಿಸಿದರು.ನರ್ಸರಿ ಉದ್ಯಮಿಗಳು ಮತ್ತು ಅವರ ಯಶಸ್ಸಿನ ಬಗ್ಗೆ ತಮ್ಮ ಅನುಭವ ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಸಹಾಯಕ ತೋಟಗಾರಿಕಾ ಅಧಿಕಾರಿ ಮತ್ತು ಸಲಹೆಗಾರರಾದ ಸುರೇಂದ್ರ ಕುಮಾರ್ ಅವರು, ಸರ್ಕಾರದ ಯೋಜನೆಗಳಲ್ಲಿ ಲಭ್ಯವಿರುವ ಯೋಜನೆಗಳು, ಸಹಾಯಧನ ಮತ್ತು ಸಹಾಯದ ಕುರಿತು ರೈತರಿಗೆ ತಿಳಿಸಿದರು.ಮೊದಲ ದಿನದಲ್ಲಿ ಪ್ರಶಿಕ್ಷಣಾರ್ಥಿಗಳಿಗೆ ಮೂಲ ಸಸ್ಯ ಪ್ರಸರಣ ಮತ್ತು ಅದರ ಪ್ರಕಾರಗಳ ಬಗ್ಗೆ ತಿಳಿಸಲಾಯಿತು. ನರ್ಸರಿ ಅಭ್ಯಾಸಗಳಲ್ಲಿ ಅಳವಡಿಸಿಕೊಂಡ ಪರಿಕರಗಳು ಮತ್ತು ತಂತ್ರಗಳು ಮತ್ತು ತೋಟಗಾರಿಕೆ ಬೆಳೆಗಳಲ್ಲಿ ಸಸ್ಯಕಸಿ ಪ್ರಾಮುಖ್ಯತೆ ವಿವರಿಸಲಾಯಿತು. ನೆರಳೆ ಮರದಲ್ಲಿ ಮೊಳಕೆ–ಕಸಿ ಮಾಡುವುದನ್ನು ಪ್ರದರ್ಶಿಸಲಾಯಿತು.

ಎರಡನೇಯ ದಿನದಂದು ಪ್ರಶಿಕ್ಷಣಾರ್ಥಿಗಳು, ಸಂಡೂರಿನ ಧರ್ಮಪುರ ತೋಟಗಾರಿಕಾ ಕ್ಷೇತ್ರಕ್ಕೆ ಭೇಟಿ ನೀಡಿ ಮಾವು, ಹಲಸು ಮತ್ತು ತೆಂಗಿನಕಾಯಿ ಪ್ರಸರಣ, ನಿರ್ವಹಣೆ ಮತ್ತು ಗುಣಮಟ್ಟದ ಬೀಜ ಸಾಮಗ್ರಿ ಮತ್ತು ತಾಯಿ ಸಸ್ಯ ಆಯ್ಕೆಯ ಬಗ್ಗೆ ತರಬೇತಿ ನೀಡಲಾಯಿತು. ಬಳಿಕ ಮುನಿರಾಬಾದ್ ನಲ್ಲಿರುವ ತೋಟಗಾರಿಕೆ ಮಹಾವಿದ್ಯಾಲಕ್ಕೆ ಭೇಟಿ ನೀಡಿ, ಪ್ರಶಿಕ್ಷಣಾರ್ಥಿಗಳು ನರ್ಸರಿಯ ಮೂಲಸೌಕರ್ಯ ಮತ್ತು ಔಳಧೀಯ ಸಸ್ಯಗಳ ಪ್ರಸರಣ ವಿಧಾನಗಳ ಬಗ್ಗೆ ವಿವರಿಸಲಾಯಿತು.

ಅಲ್ಲಿನ ಗೋಡಂಬಿ ತೋಟಗಳಿಗೆ ಭೇಟಿ ನೀಡಿ ತಮ್ಮ ಗ್ರಾಮದಲ್ಲಿ ಗೋಡಂಬಿ ಬೆಳೆ ಕೃಷಿ, ತಳಿಗಳು ಮತ್ತು ಸಾಧ್ಯತೆಗಳ ಬಗ್ಗೆ ತಿಳಿದುಕೊಂಡರು. ಕಾಲೇಜು ಕ್ಯಾಂಪಸ್ಸಿನಲ್ಲಿರುವ ಔಳಧೀಯ ಮತ್ತು ಸುಗಂಧ ಸಸ್ಯಗಳ ಉದ್ಯಾನ ಮತ್ತು ಪ್ರಸರಣ ಪಾಲಿಹೌಸ್ಗಳಿಗೆ ಭೇಟಿ ನೀಡಿದರು.

ಮೂರನೇಯ ದಿನದಂದು ಬಳ್ಳಾರಿಯ ತೋಟಗಾರಿಕೆ ಇಲಾಖೆಯ ನರ್ಸರಿಗೆ ಭೇಟಿ ನೀಡಿ, ಅಲಂಕಾರಿಕ ಸಸ್ಯ ಮತ್ತು ಹಣ್ಣಿನ ಗಿಡಗಳಲ್ಲಿ ಅಳವಡಿಸಿಕೊಂಡಿರುವ ಪ್ರಸರಣ ತಂತ್ರಗಳ ಬಗ್ಗೆ ತಿಳಿದುಕೊಂಡರು.ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರಾದ ಯೋಗೇಶ್ವರ್ ಅವರು ಅಲಂಕಾರಿಕ ಗಿಡಗಳು ಮತ್ತು ಅವುಗಳ ಮಹತ್ವದ ಬಗ್ಗೆ ವಿವರಿಸಿದರು. ಜಿಲ್ಲಾ ಪಂಚಾಯನ್ನಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರಾದ ರತ್ನಪ್ರಿಯಾ ಯರಗಲ್ ಅವರು ಇಲಾಖಾ ಯೋಜನೆಗಳು ಮತ್ತು ಸಹಾಯಧನಗಳ ಬಗ್ಗೆ ವಿವರಿಸಿದರು.ಕಾರ್ಯಕ್ರಮದಲ್ಲಿ ಬೆಳಗಲ್ ತಾಂಡಾ ಗ್ರಾಮದ ಒಟ್ಟು 25 ರೈತರು ಭಾಗವಹಿಸಿದ್ದರು.

# ಹಣಕಾಸು ಶಿಕ್ಷಣ ಮತ್ತು ಹೂಡಿಕೆ ದೇಶದ ಅಭಿವೃದ್ಧಿಗೆ ಪೂರಕ–ಪ್ರೊ.ಕೆ.ಎಂ.ಮೇತ್ರಿ




ಬಳ್ಳಾರಿ,ಮಾ–:ಹಣಕಾಸು ಶಿಕ್ಷಣ ಮತ್ತು ಹೂಡಿಕೆ ಎಂಬ ವಿಷಯವನ್ನು ಕೌಶಲ್ಯವರ್ಧನೆ ವಿಷಯವನ್ನಾಗಿ ಪಠ್ಯಕ್ರಮದಲ್ಲಿ ಅಳವಡಿಸಿರುವುದರಿಂದ ಉನ್ನತ ಶಿಕ್ಷಣದಲ್ಲಿ ವಿದ್ಯಾರ್ಥಿಗಳ ಕ್ಷಿಪ್ರ ಕಲಿಕೆಗೆ ಹಾಗೂ ಉದ್ಯೋಗ ಶೀಲರನ್ನಾಗಿಸಲು ಸಹಕಾರಿಯಾಗುತ್ತದೆ ಎಂದು ವಿಶ್ವ ವಿದ್ಯಾಲಯದ ಕುಲಪತಿಗಳಾದ ಪ್ರೊ.ಕೆ.ಎಂ.ಮೇತ್ರಿ ಅವರು ಹೇಳಿದರು.ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ.ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ ಗುರುವಾರ ವಾಣಿಜ್ಯ ಅಧ್ಯಯನ ವಿಭಾಗದ ವತಿಯಿಂದ ಆಯೋಜಿಸಲಾಗಿದ್ದ 'ವ್ಯಾಪಾರದಲ್ಲಿ ಸ್ಥಿತಿಸ್ಥಾಪಕತ್ವದ ನವ ಪ್ರವೃತ್ತಿ' ಎಂಬ ವಿಷಯದ ಕುರಿತು ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು. ವಾಣಿಜ್ಯ ಅಥವಾ ನಿರ್ವಹಣಾ ಶಾಸ್ತ್ರ ವಿಭಾಗದ ವಿದ್ಯಾರ್ಥಿಗಳಿಗೆ ಸೀಮಿತವಾಗದೇ ಇನ್ನಿತರ ವಿಭಾಗಗಳ ವಿದ್ಯಾರ್ಥಿಗಳಿಗೆ ಬಹುಶಿಸ್ತೀಯ ಅಧ್ಯಯನ ವಿಷಯವಾಗಿ ಪರಿಚಯಿಸುವುದು ಅಗತ್ಯ ಎಂದು ಅಭಿಪ್ರಾಯ ಪಟ್ಟರು.

ಪ್ರತಿಯೊಂದು ವಿಷಯದ ಅಭಿವೃದ್ಧಿಗೆ ತಳಮಟ್ಟದ ಅಧ್ಯಯನ ಬಹು ಮುಖ್ಯವಾಗಿದೆ. ಮುಂದಿನ ದಿನಗಳಲ್ಲಿ ವಿಶ್ವವಿದ್ಯಾಲಯದ ಅಭಿವೃದ್ಧಿಗೆ ಎಲ್ಲರೂ ಕೈಜೋಡಿಸಬೇಕು ಎಂದರು.ಮುಖ್ಯ ಅತಿಥಿಯಾಗಿ ಅಗಮಿಸಿದ್ದ ಸೌತ್ ಇಂಡಿಯನ್ ರಿಜನಲ್ ಕೌನ್ಸಲ್ ಆಫ್ ಇನ್ಸ್ಟಿಟ್ಯೂಟ್ ಆಫ್ ಚಾರ್ಟರ್ಡ್ ಅಕೌಂಟೆಂಟ್ಸ್ ಆಫ್ ಇಂಡಿಯಾದ ನಿಕಟಪೂರ್ವ ಅಧ್ಯಕ್ಷರಾದ ಸಿ.ಎ.ಪನ್ನಾರಾಜ್.ಎಸ್ ಅವರು ಮಾತನಾಡಿ, ವ್ಯಾಪಾರದಲ್ಲಿ ಅನೇಕ ಅಡೆ–ತಡೆಗಳು ಇರುವುದು ಸಾಮಾನ್ಯ ಅದರಿಂದ ಹೊರಬರುವುದು ಈ ಸಮ್ಮೇಳನದ ಉದ್ದೇಶವಾಗಿದೆ ಎಂದು ತಿಳಿಸಿದರು.

ಪ್ರಸುತ್ತ ದಿನಗಳಲ್ಲಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮವು ದೇಶದ ಅಭಿವೃದ್ಧಿಗೆ ಪೂರಕವಾಗಿದೆ. ಕೇಂದ್ರ ಸರ್ಕಾರವು ಅನೇಕ ಯೋಜನೆಗಳನ್ನು ಜಾರಿಗೊಳಿಸಿದ್ದು ವಾಣಿಜ್ಯೋದ್ಯಮಿಗಳು ಇದರ ಸದಪಯೋಗ ಪಡೆದುಕೊಳ್ಳಿ ಎಂದು ಸಲಹೆ ನೀಡಿದರು.

ಮುಖ್ಯ ಭಾಷಣಕಾರರಾಗಿ ಅಗಮಿಸಿದ್ದ ಅಂತರರಾಷ್ಟ್ರೀಯ ಕಾರ್ಯಕ್ರಮಗಳು ಮತ್ತು ಪಾಲುದಾರಿಕೆಗಳ ಮೌಂಟ್ ಕಾರ್ಮೆಲ್ ಕಾಲೇಜು ಡೀನರಾದ ಡಾ.ಎಸ್.ರಮೇಶ್ ಅವರು ಮಾತನಾಡಿ, ಹಣ, ಅಧಿಕಾರ, ಆರೋಗ್ಯ ಮತ್ತು ಮನೋರಂಜನೆ ಒಂದಕ್ಕೊಂದು ಸಂಬಂಧಿಸಿದ ವಿಷಯಗಳು. ಇವುಗಳ ಸಮರ್ಪಕ ನಿರ್ವಹಣೆ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಎಲ್ಲರಿಂದ ಸಾಧ್ಯವಿಲ್ಲ. ತಂತ್ರಜ್ಞಾನ ಬಳಕೆ ಮತ್ತು ಕೌಶಲ್ಯಯುತ ಕಲಿಕೆಯ ಸಮಜ್ಞಾನದಿಂದ ಇವುಗಳ ನಿರ್ವಹಣೆ ಭಾಗಶಃ ಪಡೆದುಕೊಳ್ಳಬಹುದು ಎಂದು ಹೇಳಿದರು.ಸಮ್ಮೇಳನದಲ್ಲಿ ನೂರಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಿ ತಮ್ಮ ಸಂಶೋಧನಾ ಕುರಿತಾದ ಪ್ರಬಂಧ ಮಂಡಿಸಿದರು.ಈ ಸಂದರ್ಭದಲ್ಲಿ ವಿವಿಯ ಕುಲಸಚಿವರಾದ ರುದ್ರೇಶ್ ಎಸ್.ಎನ್., ಕುಲಸಚಿವರು (ಮೌಲ್ಯ ಮಾಪನ) ಪ್ರೊ.ರಮೇಶ್ ಓಲೇಕಾರ್, ವಿತ್ತಾಧಿಕಾರಿ ಪ್ರೊ.ಸದ್ಯೋಜಾತಪ್ಪ, ನಿರ್ವಹಣಾಶಾಸ್ತ್ರ ಡೀನರಾದ ಪ್ರೊ.ಜಿ.ಪಿ. ದಿನೇಶ್ ಸಮ್ಮೇಳನದ ಸಂಚಾಲಕರಾದ ಪ್ರೊ.ಜೀಲನ್ ಬಾಷಾ ಹಾಗೂ ಪ್ರೊ.ಭೀಮನಗೌಡ ಸೇರಿದಂತೆ ವಿವಿಧ ನಿಕಾಯಗಳ ಡೀನರು, ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಬೋಧಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಗಂಗೆಗೌರಿ ಮಡ್ಡಿಯಲ್ಲಿ ಮೂಲಭೂತ ಸೌಕರ್ಯ ಒದಗಿಸುವಂತೆ ಆಗ್ರಹ



ಬೈಲಹೊಂಗಲ : ಪಟ್ಟಣದ ಗಂಗೆಗೌರಿ ಮಡ್ಡಿಯಲ್ಲಿ ವಾಸಿಸುತ್ತಿರುವ ಗೋಸಂಗಿ ಸಮಾಜದವರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ಆಗ್ರಹಿಸಿ ಉಪವಿಭಾಗಾ ಧಿಕಾರಿ ಗಳಿಗೆ ಶುಕ್ರವಾರ ಮನವಿ ಅರ್ಪಿಸಿದರು. ಗೋಸಂಗಿ ಸಮಾಜ ದ ಮುಖಂಡರಾದ ಗೋಪಿ ಪವಾ ರ, ರಮೇಶ ಕಾವಳೆ ಮಾತನಾಡಿ, ಕಳೆದ 20 ವರ್ಷಗಳಿಂದ ಗೋಸಂಗಿ ಸಮಾಜದವರಾದ ನಾವುಗಳು ಪುರಸಭೆಯವರು ನೀಡಿದ ಜಾಗೆಯಲ್ಲಿ ಹಕ್ಕು ಪತ್ರ ಪಡೆದು ವಾಸಿಸುತ್ತಿದ್ದೇವೆ. ಇಲ್ಲಿ ದೊಡ್ಡ ದೊಡ್ಡ ಕಲ್ಲು ಬಂಡೆಗಳಿದ್ದು,ಸಂಚಾರಕ್ಕೆ ತೊಂದರೆಯಾಗಿದೆ. ಕಲ್ಲುಗಳನ್ನು ತೆರವುಗೊಳಿಸಿ ರಸ್ತೆ ನಿರ್ಮಿಸಲು ಪುರಸಭೆಯ ವರಿಗೆಹ 'ಲವಾರು ಬಾರಿ ಮನವಿ ಮಾಡಿಕೊಂಡಿದ್ದೇವೆ. ಆದರೆ ಇಲ್ಲಿಯವರೆಗೂ ಸ್ಪಂದನೆ ಸಿಕ್ಕಿಲ್ಲ. ಪಕ್ಕದಲ್ಲಿ ಒಳಚರಂಡಿ ಕಾಮಗಾರಿನಡೆದಿದ್ದು, ಅದು ನಮ್ಮ ಮನೆಗಳ ತನಕ ಬರದಂತೆ ತಡೆ ಹಿಡಿಯಲಾಗಿದೆ ಎಂದು ಆರೋಪಿಸಿದ ಅವರು ನಮ್ಮ ಸಮಾಜದ ಹೆಣ್ಣು ಮಕ್ಕಳು ಶೌಚಾಲಯಕ್ಕೆ ಹೋಗಲು ತೊಂದರೆ ಆಗುತ್ತಿದ್ದು, ಸಂಭಂದಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮೂಲಭೂತ ಸೌಕರ್ಯ ಒದಗಿಸಲು ಕ್ರಮ ಜರುಗಿಸಬೇಕೆಂದು ಆಗ್ರಹಿಸಿದರು.ಈ ಸಂದರ್ಭದಲ್ಲಿ ಡಿಎಸ್‌ಎಸ್ ಮುಖಂಡ ರುದ್ರಪ್ಪ ನಿಂಗ 'ಣ್ಣವರ,ರಫೀಕ ಬಡೇಘರ, ರುದ್ರಪ್ಪ ಮುಂದಿನಮನಿ, ಆನಂದ ಪೂಜೇರ, ವೀರಭದ್ರ ದೇಮತಿ, ಅಜೀತ ಕಾವಳೆ, ರವಿ ಗೋಶಾವಿ, ಸಂತರಾಮ ಕಾವಳೆ ಸೇರಿದಂತೆ ಗಂಗೆಗೌರಿ ಮಡ್ಡಿಯ ನಿವಾಸಿಗಳು ಉಪಸ್ಥಿತರಿದ್ದರು.

ವರದಿ:ಈಶ್ವರ ಶಿಲ್ಲೇದಾರ.